**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ. ಸಂಖ್ಯೆ: 856/2021</u>**

**<u>ಪಿರ್ಯಾದಿ</u>** : ಶ್ರೀ ಎಂ.ವಿ.ವಿವೇಕ್ ಬಿನ್ ನಂಜೇಗೌಡ,
ವಯಸ್ಸು ಸುಮಾರು 30 ವರ್ಷ,
ವಾಸಃ ಮಧುಗುಂಡಿ ಗ್ರಾಮ, ಸುಂಕಸಾಲೆ ಅಂಚೆ,
ಬಾಳೂರು ಹೋಬಳಿ, ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

**ವಿರುದ್ಧ**

**<u>ಆರೋಪಿ</u>** : ಶ್ರೀ ಕೆ.ಆರ್ ಚಂದ್ರು ಬಿನ್ ರಾಮಚಂದ್ರ ಒಡೆಯರ್,
ವಯಸ್ಸು ಸುಮಾರು 32 ವರ್ಷ,
ವಾಸಃ ಬಿಳಗುಳ ಗ್ರಾಮ, ಹೆಸಗಲ್ ಅಂಚೆ,
ಮೂಡಿಗೆರೆ ತಾಲ್ಲೂಕು.

**<u>ಆಪಾದನೆಯ ಸಾರಾಂಶ</u>**

ನಾನು ಶ್ರೀ ಸಚಿನ್.ಡಿ, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆ:-

ಆರೋಪಿಯಾದ ನೀವು ಫಿರ್ಯಾದಿಯನ್ನು ಸಂಪರ್ಕಿಸಿ, ನಿಮ್ಮ ತುರ್ತು ಹಣದ ಅವಶ್ಯಕತೆಗಳಿಗೋಸ್ಕರ ಅವರಿಂದ 5,00,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಸಾಲದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಬ್ಯಾಂಕ್ ಆಫ್ ಬರೋಡಾ, ಹೆಸಗಲ್ ಶಾಖೆಯ ಚೆಕ್ ಸಂಖ್ಯೆ000002, ದಿನಾಂಕ30.01.2021, ರೂ.5,00,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಸದರಿ ಬ್ಯಾಂಕಿನಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿರುವುದಿಲ್ಲ (Insufficient Funds) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 31.03.2021 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್

ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ದಿನಾಂಕ 10.01.2024 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

Sd/-

ಮೂಡಿಗೆರೆ
ದಿನಾಂಕಃ 10.01.2024

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.